SL. No. : DD

ಒಟ್ಟು ಪ್ರಶ್ನೆಗಳ ಸಂಖ್ಯೆ : 49 ]
Total No. of Questions : 49 ]
ಸಂಕೇತ ಸಂಖ್ಯೆ : **01-K**

**CCE RR**
**UN-REVISED**

[ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8
[ Total No. of Printed Pages : 8
**Code No. : 01-K**

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**(ಹೊಸ ಪಠ್ಯಕ್ರಮ / New Syllabus)**

**(ಪುನರಾವರ್ತಿತ ಶಾಲಾ ಅಭ್ಯರ್ಥಿ / Regular Repeater)**

ದಿನಾಂಕ : 23. 03. 2018 ] [ Date : 23. 03. 2018

ಸಮಯ : ಬೆಳಿಗ್ಗೆ 9-30 ರಿಂದ ಮಧ್ಯಾಹ್ನ 12-30 ರವರೆಗೆ ] [ Time : 9-30 A.M. to 12-30 P.M.

ಗರಿಷ್ಠ ಅಂಕಗಳು : 100 ] [ Max. Marks : 100

## *ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :*

1. ಈ ಪ್ರಶ್ನೆಪತ್ರಿಕೆಯು 49 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ಕೊಡಲಾಗಿದೆ.

ಇಲ್ಲಿ ಕತ್ತರಿಸಿ

**TEAR HERE TO OPEN THE QUESTION PAPER**
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

**Tear here**



https://www.karnatakaboard.com/
https://www.karnatakaboard.com/

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪೋಷಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ :** $9 \times 1 = 9$

1. ಪಾಶ್ಚಾತ್ಯರಲ್ಲಿ ಮಕ್ಕಳಾದಿಯಾಗಿ ಎಲ್ಲರೂ ತಿಳಿದುಕೊಂಡಿರುವ ಅಂಶಗಳು ಯಾವುವು ?
2. ನಾಡ ಭವ್ಯ ಜನರು ಬುಕ್ಕರಾಯನ ಬಳಿ ಏನೆಂದು ಬಿನ್ನಹ ಮಾಡಿದರು ?
3. ಬ್ರಿಟಿಷ್ ಸರ್ಕಾರ ವಿಶ್ವೇಶ್ವರಯ್ಯ ಅವರಿಗೆ ಯಾವ ಪದವಿಯನ್ನು ನೀಡಿ ಗೌರವಿಸಿತು ?
4. ಮನೆಮಂಚಮ್ಮನ ಕಥೆ ಹೇಳಿದ ಕವಿ ಯಾರು ?
5. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು ?
6. ಗಾಂಡೀವಿ ಎಂದು ಹೆಸರು ಪಡೆದವರು ಯಾರು ?
7. ಶಿವನಿಗೆ ಯಾರ ಭಕ್ತಿ ಹಿತವೆನಿಸುತ್ತದೆ ?
8. ಅಜ್ಞಾನ ತೊಲಗಿಸಲು ಕವಯಿತ್ರಿ ಇಂದುಮತಿ ಲಮಾಣಿ ಏನಾಗ ಬಯಸಿದ್ದಾರೆ ?
9. ಮುದ್ದು ಪಾರಿವಾಳಗಳ ಜೋಡಿ ಎಲ್ಲಿ ಸಂಸಾರ ಹೂಡಿತ್ತು ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $10 \times 2 = 20$

10. 'ಧರ್ಮಸಮದೃಷ್ಟಿ' ಪಾಠದಲ್ಲಿ ರಾಮಾನುಜಾಚಾರ್ಯರ ಗುಣವಿಶೇಷತೆಯನ್ನು ಹೇಗೆ ಕೊಂಡಾಡಲಾಗಿದ ?
11. ಹೈದರಾಬಾದ್ ನಗರದಲ್ಲಿ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಸೇವೆ ಯಾವುದು ?
12. ಡಾ॥ ಅಶೋಕ ಪೈ ಅವರು ಹೇಳಿದ ಸಂಶೋಧನಾ ಸತ್ಯವೇನು ?
13. ಧರ್ಮಬುದ್ಧಿಯು ದುಷ್ಟಬುದ್ಧಿಯಿಂದ ಪಡೆದ ಸಲಹೆ ಯಾವುದು ?
14. ಮಾತಿನ ಮಹತ್ವವನ್ನು ಬಸವಣ್ಣನವರು ಹೇಗೆ ವಿಶ್ಲೇಷಿಸಿದ್ದಾರೆ ?
15. ಗಡಿಯ ಆಚೆ–ಈಚೆ ಜೀವಿಗಳು ಏಕೆ ಶವವಾದವು ?
16. ವಿಜ್ಞಾನಿಗಳ ವೈರುಧ್ಯ ಭಾವನೆಯನ್ನು ವಿವರಿಸಿ.
17. ಭರತ ಚಕ್ರವರ್ತಿಗೆ ತನ್ನ ಹೆಸರನ್ನು ಬರೆಸಲು ಏಕೆ ಸಾಧ್ಯವಾಗಲಿಲ್ಲ ?
18. ಬಾಳಿನಲ್ಲಿ ತೃಪ್ತಿ ದೊರಕಬೇಕಾದರೆ ಏನು ಮಾಡಬೇಕೆಂಬುದು ಸ್ವಾಮಿ ವಿವೇಕಾನಂದರ ಅಭಿಪ್ರಾಯವಾಗಿತ್ತು ?
19. 'ಬೀಸುಕಲ್ಲು' ಎಂಬ ಅರ್ಥ ಬರಲು ಹೇಳಿದ ಒಗಟನ್ನು ಬರೆಯಿರಿ.



https://www.karnatakaboard.com/

https://www.karnatakaboard.com/

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** 4 × 3 = 12

20. "ತನ್ನಂತೆ ಪರರ ಬಗೆದೊಡೆ ಕೈಲಾಸ ಬಿನ್ನಾಣಮಕ್ಕು."

21. "ನಾನು ಮುಖ ಮೇಲಾಗಿ ಬಿದ್ದಿದ್ದೆನೆ ?"

22. "ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ"

23. "ಜಾನಕಿಯ ಮಗನಿದಕೆ ಬೆದರುವನೆ"

**ಈ ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿ / ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** 2 × 3 = 6

24. ಗೊರೂರು ರಾಮಸ್ವಾಮಿ ಅಯ್ಯಂಗಾರ್

25. ಪಂಪ

26. **ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** 1 × 4 = 4

ಕಲುಷಿತವಾದೀ ..........................................................

..........................................................................

..........................................................................

.............................................................. ಮುಟ್ಟೋಣ.

**ಅಥವಾ**

ಮತಗಳೆಲ್ಲವೂ ..............................................................

..........................................................................

..........................................................................

.................................................................... ಬಿತ್ತೋಣ.



https://www.karnatakaboard.com/

https://www.karnatakaboard.com/

27. **ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** $1 \times 4 = 4$

ರಾಜ್ಯದ ಸಾಮ್ರಾಜ್ಯದ ತೆನೆ ಒಕ್ಕಿ
ಮಂಡಲ–ಗಿಂಡಲಗಳ ಗಡ ಮುಕ್ಕಿ
ತೇಲಿಸಿ ಮುಳುಗಿಸಿ ಖಂಡ–ಖಂಡಗಳ
ಸಾರ್ವಭೌಮರಾ ನೆತ್ತಿಯ ಕುಕ್ಕಿ
ಹಕ್ಕಿ ಹಾರುತಿದೆ ನೋಡಿದಿರಾ ?

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $2 \times 4 = 8$

28. ಶಬರಿಯ ಚಿಂತೆ ಹಿಂಗಿಹೋದ ಸಂದರ್ಭದ ಸ್ವಾರಸ್ಯವನ್ನು ವಿವರಿಸಿ.

***ಅಥವಾ***

ನಂಬಿಕೆಟ್ಟವರಿಲ್ಲ ಎಂಬ ಮಾತು ಶಬರಿಯ ಪಾಲಿಗೆ ಹೇಗೆ ನಿಜವಾಗಿದೆ ?

29. ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು ?

***ಅಥವಾ***

ಪಾಂಡವರು ಸೋದರರೆಂದು ತಿಳಿದಾಗ ಕರ್ಣನ ಮನಃಸ್ಥಿತಿಯನ್ನು ತಿಳಿಸಿ.

30. **ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** $2 \times 2 = 4$

ದೈನ್ಯದ ಬುಡದಲ್ಲಿ ಭಯವಿದೆ. ಭಯವೇ ನರನನ್ನು ದೀನನನ್ನಾಗಿ ಮಾಡುತ್ತದೆ. ಭಯವೆಂದರೆ ದಟ್ಟಡವಿಯಲ್ಲಿ ದಾರಿ ತಪ್ಪಿದ ಗೋವು, ಮುಚ್ಚಿದ ಕಣ್ಣುಗಳು, ಹಾರುತ್ತಿರುವ ಎದೆ, ಕತ್ತಲೆಯಲ್ಲಿ ಕಂಗೆಟ್ಟ ಶಿಶು, ಚಕ್ರವರ್ತಿಯ ಎದುರಿಗೆ ನ್ಯಾಯಸ್ಥಾನದಲ್ಲಿ ನಡುಗುತ್ತ ನಿಂತ ಅಪರಾಧಿ, ಬೇಟೆನಾಯಿ ಬೆನ್ನಟ್ಟಿದ ಮೊಲವೇ ಭಯ. ಭಯಿವು ಹುಟ್ಟುವುದು ಅಜ್ಞಾನದಿಂದ, ಪಾಪ ಶಂಕೆಯಿಂದ, ದೂಷಿತ ಹೃದಯದಿಂದ ಜ್ಞಾನ ಹೆಚ್ಚಿದಂತೆ ಭಯ ಕಡಿಮೆಯಾಗುವುದು. ಹಳ್ಳಿಗ ವಿಮಾನದಲ್ಲಿ ಕೂಡಲೂ ಅಂಜುತ್ತಾನೆ. ಆದರೆ ಕೆಲವು ತಿಂಗಳು ತರಬೇತಿ ಪಡೆದ ನಂತರ ಅವನೇ ವಿಮಾನವನ್ನು ನಡೆಸಬಹುದು. ಪ್ರತಿಯೊಬ್ಬನ ಮೇಲೆ ನಾವು ಹೊಣೆ ಹೊರಿಸಲು ಹೋಗುವುದು ತಪ್ಪಾದೀತು. ಆದರ ಆ ವ್ಯಕ್ತಿ ಇಲ್ಲವೇ ಸಂಸ್ಥೆಯ ಧೋರಣೆಯ ಹೊಣೆಯನ್ನೂ ನಾವು ಹೊತ್ತಿರಬಾರದು ಭೀಷ್ಮ, ದ್ರೋಣನಂತೆ ಒಡೆಯನಿಗೋಸ್ಕರ ದೇಹವನ್ನರ್ಪಿಸುವುದು ಕಾರ್ಯವೆಂದು ತಿಳಿದಿದ್ದರೂ ಆ ಕಾರ್ಯದ ಸಾಧು ಅಸಾಧುತೆಗಳ ಬಗ್ಗೆ ಅಭಿಪ್ರಾಯವು ಭೀಷ್ಮ



https://www.karnatakaboard.com/
https://www.karnatakaboard.com/

ದ್ರೋಣರಲ್ಲಿಯಂತೆ ಸ್ಪಷ್ಟವಾಗಿರಬೇಕು. ಬಳ್ಳಿಯಂತೆ ಯಾರೂ ಕಾಲ್ತೊಡಕಾಗಬಾರದು. ನಾಯಿಯಂತೆ ಯಾವ ಬಾಗಿಲಲ್ಲಿಯೂ ಸುಳಿಯಬಾರದು. ಮೋಡದಂತೆ ಗುರಿಯಿಲ್ಲದೆ ಗಾಳಿಯ ತೊತ್ತಾಗಬಾರದು. ನಿಲ್ಲಬೇಕಾದಲ್ಲಿ ನಿಲ್ಲುವ, ಉರುಳಬೇಕಾದಲ್ಲಿ ಉರುಳುವ ಗೋಲವಾಗಬೇಕು ವ್ಯಕ್ತಿತ್ವ. ಈ ಕೇಂದ್ರದಲಿಯೇ ವ್ಯಕ್ತಿ ಸಮಾಜಗಳ ಸಾಮರಸ್ಯದ ಬೀಜವಿದೆ.

*ಪ್ರಶ್ನೆಗಳು :*

ಅ) ಭಯವು ವ್ಯಕ್ತವಾಗುವ ಸಂದರ್ಭಗಳನ್ನು ತಿಳಿಸಿ.

ಆ) ಮಾನವನ ವ್ಯಕ್ತಿತ್ವ ಹೇಗಿರಬೇಕು ಎಂಬುದನ್ನು ಸ್ಪಷ್ಟಪಡಿಸಿ.

## ವಿಭಾಗ – 'ಬಿ'

**(ಅನ್ವಯಿಕ ವ್ಯಾಕರಣ, ಅಲಂಕಾರ ಹಾಗೂ ಛಂದಸ್ಸು)**

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** $10 \times 1 = 10$

31. ಯಣ್ ಸಂಧಿಗೆ ಉದಾಹರಣೆಯಾದ ಪದವಿದು

(ಎ) ಸೂರ್ಯೋದಯ (ಬಿ) ಅತ್ಯವಸರ

(ಸಿ) ವಾಗ್ದೇವಿ (ಡಿ) ಮೆಲ್ಲಾತು

32. 'ಕಣ್ದೆರೆ' ಪದವು ಈ ಸಮಾಸದ್ದಾಗಿದೆ

(ಎ) ಕ್ರಿಯಾ (ಬಿ) ಅಂಶಿ

(ಸಿ) ಗಮಕ (ಡಿ) ದ್ವಂದ್ವ

33. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮಾನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಬಳಸುವ ಲೇಖನ ಚಿಹ್ನೆ

(ಎ) ವಾಕ್ಯವೇಷ್ಟನ (ಬಿ) ಉದ್ಧರಣ

(ಸಿ) ಆವರಣ (ಡಿ) ವಿವರಣ

34. ತದ್ಧಿತಾಂತ ಭಾವನಾಮಕ್ಕೆ ಉದಾಹರಣೆಯಾದ ಪದ

(ಎ) ಸಿರಿವಂತೆ (ಬಿ) ಚಂದ್ರನಂತೆ

(ಸಿ) ಬಳೆಗಾರ (ಡಿ) ಜಾಣತನ

35. 'ವ್ಯಾಪಾರಿ' ಪದವು ನಾಮಪದದ ಈ ಗುಂಪಿಗೆ ಸೇರಿದೆ

(ಎ) ಅಂಕಿತನಾಮ (ಬಿ) ರೂಢನಾಮ

(ಸಿ) ಸರ್ವನಾಮ (ಡಿ) ಅನ್ವರ್ಥನಾಮ

36. ನಿಷೇಧ ಕೃದಂತಕ್ಕೆ ಸೂಕ್ತ ಉದಾಹರಣೆ

(ಎ) ಬಾಳದ (ಬಿ) ನೆನಪು

(ಸಿ) ಅಂಜಿಕೆ (ಡಿ) ಮಾಡಲಿಕ್ಕೆ



https://www.karnatakaboard.com/

https://www.karnatakaboard.com/

37. ಯಾವುದಾದರೊಂದು ಕ್ರಿಯೆ ನಡೆದ ರೀತಿಯನ್ನು ಹೇಳುವಂತಹ ಅವ್ಯಯವನ್ನು ಹೀಗೆನ್ನುವರು

(ಎ) ಕ್ರಿಯಾರ್ಥಕಾವ್ಯಯ (ಬಿ) ಸಂಬಂಧಾರ್ಥಕಾವ್ಯಯ

(ಸಿ) ಅವಧಾರಣಾರ್ಥಕಾವ್ಯಯ (ಡಿ) ಸಾಮಾನ್ಯಾವ್ಯಯ

38. ಸಂಬಂಧಕಾರಕವನ್ನು ತಿಳಿಸುವ ವಿಭಕ್ತಿ ಪ್ರತ್ಯಯ ಇದು

(ಎ) ಇಂ (ಬಿ) ಗೆ

(ಸಿ) ಅ (ಡಿ) ಅಂ

39. 'ಸಕರ್ಮಕ ಧಾತು'ವಿಗೆ ಉದಾಹರಣೆ ಇದು

(ಎ) ಹೋಗು (ಬಿ) ಕೊಡು

(ಸಿ) ಓಡು (ಡಿ) ನಾಚು

40. ಒಂದು ಪೂರ್ಣ ಕ್ರಿಯಾಪದದೊಂದಿಗೆ ಸ್ವತಂತ್ರವಾಗಿರುವ ವಾಕ್ಯವನ್ನು ಹೀಗೆಂದು ಕರೆಯುತ್ತಾರೆ

(ಎ) ಸಾಮಾನ್ಯ ವಾಕ್ಯ (ಬಿ) ಪ್ರಶ್ನಾರ್ಥಕ ವಾಕ್ಯ

(ಸಿ) ಸಂಯೋಜಿತ ವಾಕ್ಯ (ಡಿ) ಮಿಶ್ರವಾಕ್ಯ

**ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** $4 \times 1 = 4$

41. ತುತ್ತತುದಿ : ದ್ವಿರುಕ್ತಿ :: ಹಾಲ್ಜೇನು : .......................... .

42. ಪನ್ನಗ : ಹಾವು :: ಆದಿತ್ಯ : .......................... .

43. ದಿಟ್ಟಿ : ದೃಷ್ಟಿ :: ತವಸಿ : .......................... .

44. ಅರ್ಜಿ : ಹಿಂದೂಸ್ಥಾನಿ :: ರುಜು : .......................... .

45. **ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** $1 \times 3 = 3$

ಲಲನೆ ಪಡೆದೀಯೈದು ಮಂತ್ರಂ
ಗಳಲಿ ಮೊದಲಿಗ ನೀನು ನಿನ್ನಯ
ಬಳಿ ಯುಧಿಷ್ಠಿರದೇವ ಮೂರನೆಯಾತ ಕಲಿಭೀಮ

*ಅಥವಾ*

ಕುರುಕುಳನಂದನಂ ಪವನನಂದನನೆಂಬ ಮದಾಂಧಗಂಧಸಿಂ

46. **ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** $1 \times 3 = 3$

"ಭೀಮ ದುರ್ಯೋಧನರು ಮದಗಜಗಳಂತೆ ಹೋರಾಡಿದರು."

*ಅಥವಾ*

"ಮಾರಿಗೌತಣವಾಯ್ತು ನಾಳಿನ ಭಾರತವು."



https://www.karnatakaboard.com/
https://www.karnatakaboard.com/

## ವಿಭಾಗ – 'ಸಿ'

## (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

47. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ *ಒಂದನ್ನು* ವಿಸ್ತರಿಸಿ ಬರೆಯಿರಿ :** $1 \times 3 = 3$

* ದೇಶ ಸುತ್ತಿ ನೋಡು; ಕೋಶ ಓದಿ ತಿಳಿ
* ಸತ್ಯಕ್ಕೆ ಸಾವಿಲ್ಲ; ಸುಳ್ಳಿಗೆ ಸುಖವಿಲ್ಲ
* ಅತಿ ಆಸೆ ಗತಿ ಕೇಡು

48. ನಿಮ್ಮನ್ನು ಬೈಲಹೊಂಗಲದ ಗ್ರಾಮೀಣ ವಿದ್ಯಾಸಂಸ್ಥೆಯ 'ಸಮರ್ಥ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆದ 'ಅಂತರ ಶಾಲಾ ಚರ್ಚಾ ಸ್ಪರ್ಧೆಯ ಪ್ರಶಸ್ತಿ ಪ್ರದಾನ' ಸಮಾರಂಭದ ವರದಿಯನ್ನು ಪ್ರಕಟಿಸುವಂತೆ ಕೋರಿ 'ಕನ್ನಡ ಪ್ರಭ' ದಿನಪತ್ರಿಕೆಯ ಸಂಪಾದಕರಿಗೊಂದು ಮನವಿ ಪತ್ರ ಬರೆಯಿರಿ. $1 \times 5 = 5$

***ಅಥವಾ***

ನಿಮ್ಮನ್ನು ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯ 'ಪ್ರಮತ್' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆಯಲಿರುವ 'ವಿಜ್ಞಾನ ವಸ್ತುಪ್ರದರ್ಶನದ ವೀಕ್ಷಣೆ'ಗೆ ಆಗಮಿಸುವಂತೆ ಆಹ್ವಾನಿಸಿ ಯಲ್ಲಾಪುರದ ರಥಬೀದಿಯಲ್ಲಿ ವಾಸವಾಗಿರುವ 'ಸುವರ್ಣ' ಎಂಬ ಹೆಸರಿನ ಸಹೋದರಿಗೆ ಪತ್ರ ಬರೆಯಿರಿ.

49. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ *ಒಂದನ್ನು* ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ :** $1 \times 5 = 5$

* ಬಾಲ್ಯವಿವಾಹ ಒಂದು ಸಾಮಾಜಿಕ ಪಿಡುಗು
* ಸ್ವಚ್ಛತಾ ಅಭಿಯಾನದಲ್ಲಿ ಯುವಕರ ಪಾತ್ರ
* ಸಾವಯವ ಕೃಷಿ



https://www.karnatakaboard.com/
https://www.karnatakaboard.com/

https://www.karnatakaboard.com/

https://www.karnatakaboard.com/